Sri Adichunchanagiri First Grade College
Channarayapatna
Est.1979

156
7/8/23

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಸಬಲೀಕರಣ ಅಧಿಕಾರಿ ಯನ್ನು ನೇಮಕ/ನಿಯೋಜನೆ ಮಾಡುವ ಬಗ್ಗೆ.

ಓದಲಾಗಿದೆ: 1. ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ, ಕಾರ್ಯದರ್ಶಿ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ನಂ.ಕೆ-11036/3/2021-ಎಸ್‌ಸಿಡಿ-ವಿ, ದಿನಾಂಕ:10-07-2023.

2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: SWD/EDU/ED3/107/2023, C.No.-1130641.

ಪರಿಶಿಷ್ಟ ಜಾತಿಯ (IX ಮತ್ತು X ತರಗತಿಗಳನ್ನು ಒಳಗೊಂಡು) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಯೋಜನೆ ಮತ್ತು ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರದ ಶಿಕ್ಷಣ/ಕಾಲೇಜು ಇಲಾಖೆ/ಸಮಾಜ ಕಲ್ಯಾಣ ಇಲಾಖೆಗಳು ಜಂಟಿಯಾಗಿ ಕಾಲವಿಳಂಬವಿಲ್ಲದೆ ಅನುಸರಿಸಬೇಕಾದ ಅಂಶಗಳನ್ನು ಗುರುತಿಸಿ ಎಲ್ಲಾ ರಾಜ್ಯಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ನಿರ್ದೇಶನ ನೀಡಲಾಗಿದೆ.

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಪ.ಜಾತಿ ಹಾಗೂ ಪ.ಪಂಗಡ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕಾಗಿಯೇ ಪ್ರತ್ಯೇಕವಾಗಿ ಪ್ರತಿ ಕಾಲೇಜು ಮಟ್ಟದಲ್ಲಿ ಹಾಗೂ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯಾಯ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಭೋದಕೇತರ ಅಧಿಕಾರಿಯನ್ನು "ಸಬಲೀಕರಣ ಅಧಿಕಾರಿ (Empowerment Officer)" ಯನ್ನಾಗಿ ನೇಮಿಸಲು/ನಿಯೋಜಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ:2 ರಲ್ಲಿ ಕೋರಿರುತ್ತಾರೆ.

ಆದ್ದರಿಂದ, ಪ್ರತಿ ಕಾಲೇಜು ಮಟ್ಟದಲ್ಲಿ ಹಾಗೂ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯಾಯ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಭೋಧಕೇತರ ಅಧಿಕಾರಿಯನ್ನು "ಸಬಲೀಕರಣ ಅಧಿಕಾರಿ (Empowerment Officer)" ಯನ್ನಾಗಿ ನೇಮಿಸುವ/ನಿಯೋಜಿಸುವ ಕುರಿತು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 93 ಪಕವಿ 2023, ಬೆಂಗಳೂರು, ದಿನಾಂಕ: 07-08-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ "ಸಬಲೀಕರಣ ಅಧಿಕಾರಿ (Empowerment Officer)" ನೇಮಿಸಿ/ನಿಯೋಜಿಸಿ, ಈ ಕೆಳಗಿನಂತೆ ಕ್ರಮವಹಿಸುವಂತೆ ಆದೇಶಿಸಿದೆ.

1. ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ ಪ್ರತಿ ಕಾಲೇಜಿನಲ್ಲಿ ಪ್ರತ್ಯೇಕವಾಗಿ "ಸಬಲೀಕರಣ ಕೇಂದ್ರ (Empowerment cell)" ಅನ್ನು ತೆರೆಯುವುದು. ಸದರಿ ಕೇಂದ್ರಕ್ಕೆ ಒಬ್ಬ ನುರಿತ ಬೋಧಕಾ/ಬೋಧಕೇತರ ಅಧಿಕಾರಿಯನ್ನು *"ಸಬಲೀಕರಣ ಅಧಿಕಾರಿ"* ಯನ್ನಾಗಿ ನಿಯೋಜಿಸುವುದು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಆದ್ಯ ಕರ್ತವ್ಯವಾಗಿರುತ್ತದೆ.

2. ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ಕಂಡುಬರುತ್ತಿರುವ ಸಮಸ್ಯೆಗಳ ಸಂಬಂಧ ಇಲಾಖೆಯ ಕಛೇರಿ, ಇ-ಆಡಳಿತ ಕಛೇರಿ ಹಾಗೂ ಇನ್ನಿತರೆ ಕಛೇರಿಗಳನ್ನು ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ, ಮೊದಲಿಗೆ *"ಸಬಲೀಕರಣ ಅಧಿಕಾರಿ"* ಯು ಸಂಬಂಧಪಟ್ಟ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೈಕಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಹತೆಯನ್ನು ಹೊಂದಿರುವ ಬಗ್ಗೆ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿ "Eligible Students List" ಅನ್ನು ತಯಾರಿಸುವುದು.

3. "Eligible Students List" ನಲ್ಲಿನ ವಿದ್ಯಾರ್ಥಿಗಳು ಕಡ್ಡಾಯವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ಸಂಬಂಧ ವಿದ್ಯಾರ್ಥಿವೇತನ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಿ, ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವಂತೆ *"ಸಬಲೀಕರಣ ಅಧಿಕಾರಿ"* ಯು ಅಗತ್ಯ ಕ್ರಮವಹಿಸುವುದು.

4. ವಿದ್ಯಾರ್ಥಿಗಳು Online ಮೂಲಕ ಅರ್ಜಿ ಸಲ್ಲಿಸಲು ಸೂಕ್ತ ಅವಕಾಶವನ್ನು ಕಾಲೇಜಿನಲ್ಲಿಯೇ ಕಲ್ಪಿಸುವ ಸಂಬಂಧ, "ಸಬಲೀಕರಣ ಕೇಂದ್ರ (Empowerment cell)" ದಲ್ಲಿ ಕಂಪ್ಯೂಟರ್ ಮತ್ತು Internet ವ್ಯವಸ್ಥೆ ಒದಗಿಸುವುದು. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಾಗ ಪ್ರತಿ ಹಂತದಲ್ಲಿಯೂ *"ಸಬಲೀಕರಣ ಅಧಿಕಾರಿ"* ಪರಿಶೀಲಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವುದು.

5. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಕಂಡುಬರುವ ತಾಂತ್ರಿಕ ಸಮಸ್ಯೆಗಳನ್ನು ವಿಶ್ವವಿದ್ಯಾಲಯದ ನೋಡಲ್ ಅಧಿಕಾರಿಗಳು, ಇ-ಆಡಳಿತ ಇಲಾಖೆ ಹಾಗೂ ಸಂಬಂಧಪಟ್ಟ ಅನುಷ್ಠಾನ ಇಲಾಖೆಯ ಗಮನಕ್ಕೆ ತರುವುದು *"ಸಬಲೀಕರಣ ಅಧಿಕಾರಿ"* ಕರ್ತವ್ಯವಾಗಿದ್ದು, ಯಾವುದೇ ಹಂತದಲ್ಲಿಯೂ ವಿದ್ಯಾರ್ಥಿಗಳನ್ನು ಕಾಲೇಜಿನಿಂದ ವಿಶ್ವವಿದ್ಯಾಲಯಕ್ಕಾಗಲೀ, ಇ-ಆಡಳಿತ ಇಲಾಖಾ ಕಛೇರಿ/ಇಲಾಖೆಯ ಕಛೇರಿಗಳಿಗೆ ಅಲೆದಾಡಲು ಆಸ್ಪದ ನೀಡದಂತೆ ಕ್ರಮವಹಿಸುವುದು.

---3

6. ವಿದ್ಯಾರ್ಥಿಗಳು ಕಾಲೇಜಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಯ Bonafide ವಿವರಗಳನ್ನು ವಿಶ್ವವಿದ್ಯಾಲಯಗಳ ಮೂಲಕ SSP ತಂತ್ರಾಂಶಕ್ಕೆ ವರ್ಗಾವಣೆ ಮಾಡಲು ಅಗತ್ಯ ಕ್ರಮವಹಿಸುವುದು.

7. ಕಾಲೇಜುವಾರು Bonafide ವಿವರಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ ಪಡೆದು ಪರಿಶೀಲಿಸಿ, ಸದರಿ ವಿವರಗಳಲ್ಲಿ ತಪ್ಪುಗಳು ಏನಾದರೂ ಇದ್ದಲ್ಲಿ, "ಸಬಲೀಕರಣ ಅಧಿಕಾರಿ" ಯೇ ವಿಶ್ವವಿದ್ಯಾಲಯ ಹಾಗೂ ಇತರೆ ಕಛೇರಿಗಳನ್ನು ಸಂಪರ್ಕಿಸಿ ಸರಿಪಡಿಸುವುದು.

8. ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಕೋರಿ ಅರ್ಜಿಯನ್ನು ಸಲ್ಲಿಸಿದ ನಂತರದಲ್ಲಿ, ವಿದ್ಯಾರ್ಥಿಗಳ ವಿವರಗಳನ್ನು ಒಳಗೊಂಡಂತೆ ಪಟ್ಟಿಯನ್ನು ತಯಾರಿಸಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸುವುದು ಹಾಗೂ ಸದರಿ ಅರ್ಜಿಗಳು ನಿಗದಿತ ಕಾಲದಲ್ಲಿ ಅನುಮೋದನೆಯಾಗುವಂತೆ ಹಿಂಬಾಲಿಕೆ ಕ್ರಮವಹಿಸುವುದು.

9. ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಂದ (ಭಾರತ ಸರ್ಕಾರದ ಮೆಟ್ರಿಕ್ ನಂತರದ ಮಾರ್ಗಸೂಚಿಯಂತೆ) (ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೇಲ್ಪಟ್ಟವರು ಹಾಗೂ ಮ್ಯಾನೇಜ್‌ಮೆಂಟ್ ಕೋಟಾದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಸದರಿ ಯೋಜನೆಗೆ ಅರ್ಹತೆ ಪಡೆದಿರುವುದಿಲ್ಲ) ಆರಂಭದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡದೆ Freeship card ಬಳಸಿ ದಾಖಲಾತಿಗೆ ಕ್ರಮವಹಿಸುವುದು.

10. ಸದರಿ ಸಬಲೀಕರಣ ಅಧಿಕಾರಿಗಳ ವಿವರಗಳನ್ನು SSP Portal ನಲ್ಲಿ ನಮೂದು ಮಾಡಲು ಕಾಲೇಜುವಾರು Login ಗಳನ್ನು ನೀಡಲು ಕಾರ್ಯಕ್ರಮ ನಿರ್ದೇಶಕರು, SSP ರವರಿಗೆ ಸೂಚಿಸಿದೆ.

11. ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಪರಿಣಾಮಕಾರಿಯನ್ನಾಗಿ ಅನುಷ್ಠಾನ ಮಾಡಲು ನಿಯೋಜಿತ ಅಧಿಕಾರಿಗಳಿಗೆ ಕಾಲಕಾಲಕ್ಕೆ ಸಮಾಜ ಕಲ್ಯಾಣ ಹಾಗೂ SSP ರವರು ಜಂಟಿಯಾಗಿ ತರಬೇತಿ ನೀಡಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಶಂಕರ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ
7/8/2023

**ಇವರಿಗೆ,**

1) ಮಹಾಲೇಖಪಾಲರು ಲೆಕ್ಕ ಪತ್ರ: ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ, ಬೆಂಗಳೂರು.

----4

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಉನ್ನತ ಶಿಕ್ಷಣ, ತಾಂತ್ರಿಕ ಶಿಕ್ಷಣ ) ಬಹುಮಹಡಿಗಳ ಕಟ್ಟಡ , ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ , ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು(ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
6) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
8) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
10)ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
11) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
12)ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ(ಇ-ಆಡಳಿತ), ಬೆಂಗಳೂರು.
13)ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
14)ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ(ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
15)ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂ. ಇವರ ಮುಖಾಂತರ)
16)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/83/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು ದಿನಾಂಕ:03.08.2023

Sri Adichunchanagiri First Grade College Channarayapatna 1979

## ಸುತ್ತೋಲೆ

ವಿಷಯ: ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ e-Rupi ವ್ಯವಸ್ಥೆಯನ್ನು ಅಳವಡಿಸಿರುವ ಸಂಬಂಧ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಬ್ಯಾಂಕ್ ಖಾತ VPA (Virtual Payment Address) ID ಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: 1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಕಇ/ಇಡಿ/03/ವಿ.ವೇತನ ಕೋಶ/ಸಿಆರ್/2022-23 ದಿನಾಂಕ:10.02.2023.
2. ಸಮಸಂಖ್ಯೆಯ ಪತ್ರದ ದಿನಾಂಕ:27.02.2023, ದಿ:11.07.2023

**********

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ ಹಾಗೂ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಸಮಾಜ ಕಲ್ಯಾಣ ಇಲಾಖೆಯು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಮಂಜೂರು ಮಾಡುತ್ತಿದೆ.

ಅದರಂತೆ 2022-23ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾದ ವಿದ್ಯಾರ್ಥಿ ವೇತನದ ಮೊತ್ತವನ್ನು e-Rupi ಮುಖಾಂತರ ಪಾವತಿ ಮಾಡಲು VPA (Virtual Payment Address) ಅಗತ್ಯವಿದ್ದು, ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಸಂಸ್ಥೆಯ ವಿದ್ಯಾರ್ಥಿವೇತನ ಖಾತೆಗೆ ಸಂಬಂದಿಸಿದ ಬ್ಯಾಂಕಿನ ನಿಖರವಾದ ವಿಳಾಸವನ್ನು ಬ್ಯಾಂಕಿನಿಂದ VPA (Virtual Payment Address) ಪಡೆದು, Bank Branch Manager ಮತ್ತು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಜಂಟಿ ಸಹಿಯೊಂದಿಗೆ VPA ID ಯನ್ನು ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸುವಂತೆ ಸೂಚಿಸಲಾಗಿದ್ದರೂ ಕೆಲವು ಕಾಲೇಜುಗಳ ಪ್ರಾಂಶುಪಾಲರು VPA ID ಮಾಹಿತಿಯನ್ನು ಇಲ್ಲಿಯವರೆಗೂ ಸಲ್ಲಿಸಿರುವುದಿಲ್ಲ.

ಅದ್ದರಿಂದ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ತಮ್ಮ ವ್ಯಾಪ್ತಿಯ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಮ್ಮ ಕಾಲೇಜಿನ ವಿದ್ಯಾರ್ಥಿವೇತನ ಖಾತೆಯ VPA ID ಯನ್ನು ಕಡ್ಡಾಯವಾಗಿ ಬ್ಯಾಂಕಿನಿಂದ ಪಡೆಯಲು ಸೂಚಿಸಲು ಹಾಗೂ VPA ID ಮಾಹಿತಿಯನ್ನು ಪಡೆದು ತಮ್ಮ ಹಂತದಲ್ಲಿಯೇ ಕ್ರೋಡಿಕರಿಸಿ, ದಿನಾಂಕ:10.08.2023 ರೊಳಗೆ ಕೇಂದ್ರ ಕಛೇರಿಗೆ ತುರ್ತಾಗಿ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ: 1.ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಯ ಅನುದಾನಿತ ಕಾಲೇಜುಗಳಿಂದ ಮಾಹಿತಿ ಕ್ರೋಡಿಕರಿಸಿ ಸಲ್ಲಿಸುವುದಕ್ಕಾಗಿ,
2. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು.
3. ಕಛೇರಿ ಪ್ರತಿ

To,
Prashanth

7/8/23

Principal
Sri Adichunchanagiri First Grade College
Channarayapatna-573 116

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:21/ಸುತ್ತೋಲೆ/2023-24/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:28.08.2023.

Sri Adichunchanagiri First Grade College Channarayapatna Est.1979

## ಸುತ್ತೋಲೆ

Sri Adichunchanagiri First Grade College Channarayapatna No. 171 Dt. 30/8/23 573116

ವಿಷಯ: ರಾಜ್ಯದ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಸಬಲೀಕರಣ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ,

ಉಲ್ಲೇಖ: 1) ದಿನಾಂಕ: 07.08.2023ರ ಸರ್ಕಾರದ ಆದೇಶ ಸಂಖ್ಯೆ: ಸಕಇ 93 ಪಕವಿ 2023, ಬೆಂಗಳೂರು.

2) ಇಲಾಖೆಯ ಪತ್ರ ಸಂಖ್ಯೆ: ಕಾಶಿಇ:21/ಮೆಟ್ರಿ.ವಿ.ವೇ/2023-24,ದಿ:10.08.2023

•••

ಸೂಚಿತ ವಿಷಯಕ್ಕೆ ಸಂಬಂದಿಸಿದಂತೆ ಉಲ್ಲೇಖಿತ ಸರ್ಕಾರದ ಆದೇಶದನ್ವಯ ರಾಜ್ಯದ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಪ್ರತಿ ಕಾಲೇಜು ಮಟ್ಟದಲ್ಲಿ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಅಧಿಕಾರಿಗಳಲ್ಲಿ ಒಬ್ಬರನ್ನು "ಸಬಲೀಕರಣ ಅಧಿಕಾರಿ" ಯನ್ನಾಗಿ (Empowerment Officer)ನೇಮಿಸಬೇಕಾಗಿರುವುದರಿಂದ ಎಲ್ಲಾ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಾಲೇಜಿನಲ್ಲಿ ಪ್ರತ್ಯೇಕ ಸಬಲೀಕರಣ ಕೇಂದ್ರವನ್ನು ತೆರೆದು ಸಬಲೀಕರಣ ಅಧಿಕಾರಿಯನ್ನು ನೇಮಿಸುವಂತೆ ಸೂಚಿಸಲು ಹಾಗೂ ಕಾಲೇಜುಗಳಿಂದ ಪಡೆದ ಮಾಹಿತಿಯನ್ನು ಕ್ರೋಡಿಕರಿಸಿ ಕೇಂದ್ರ ಕಛೇರಿಗೆ ದಿನಾಂಕ:05.09.2023ರೊಳಗೆ ಈ ಮುಂದಿನ ಇ-ಮೇಲ್ ವಿಳಾಸ:dce.scholarship2013@gmail.com ಗೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

(ಸಬಲೀಕರಣ ಅಧಿಕಾರಿ ಕಾರ್ಯಗಳನ್ನು ಉಲ್ಲೇಖ 1ರ ಸರ್ಕಾರದ ಆದೇಶದಲ್ಲಿ ಸೂಚಿಸಿರುವಂತೆ ನಿರ್ವಹಿಸುವುದು.)

(ಕರಡು ಪ್ರತಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು.

ಪ್ರತಿಗಳು:

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ. (ಅಗತ್ಯ ಕ್ರಮಕ್ಕಾಗಿ)
2) ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು. ವೆಬ್ ಸೈಟ್ ನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ

To,
ಡಾ. ನಾಗರಾಜ. ಎನ್.ಬಿ

Principal
Sri Adichunchanagiri First Grade College
Channarayapatna-573116
30/08/23

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:31/ಸುತ್ತೋಲೆ/ವಿ.ವೇ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:10.10.2023.

Sri Adichunchanagiri First Grade College
No. 239
Dt. 30/10/23
573116
Channarayapatna

## ಸುತ್ತೋಲೆ

ವಿಷಯ: 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಎಸ್‌ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ 237 ಹೆಚ್‌ಪಿಸಿ 2022,ಬೆಂಗಳೂರು, ದಿನಾಂಕ:11.01.2022.ಮತ್ತು ದಿ:16.01.2022ರ ತಿದ್ದುಪಡಿ ಆದೇಶ

***

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ ಉಲ್ಲೇಖಿತ ಸರ್ಕಾರದ ಆದೇಶದ ಅನ್ವಯ 2023-24 ನೇ ಸಾಲಿಗೆ ಸರ್ಕಾರಿ ಮತ್ತು ದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಇಲಾಖೆಯಿಂದ ಜೂರು ಮಾಡುತ್ತಿರುವ ಸಂಚಿ ಹೊನ್ನಮ್ಮ, ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ, ಹೆಚ್‌ಐವಿ/ಲೆಪ್ರಸಿ ವಿದ್ಯಾರ್ಥಿವೇತನ, ಹೆಣ್ಣು ಮಕ್ಕಳ ಮರುಪಾವತಿ, ಪದವಿ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ ಜೂರಾತಿಗಾಗಿ ಎಸ್.ಎಸ್.ಪಿ ಪೋರ್ಟಲ್‌ನ ಈ ಮುಂದಿನ ಲಿಂಕ್ tps://ssp.postmatric.karnataka.gov.in/2324_sa/signin.aspx ಮೂಲಕ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

| ವಿದ್ಯಾರ್ಥಿವೇತನ ಯೋಜನೆಯ ಹೆಸರು | ಅರ್ಜಿ ಸಲ್ಲಿಸಲು ಬೇಕಿರುವ ಅರ್ಹತೆ | ಅರ್ಜಿ ಸಲ್ಲಿಸುವ ಬಗ್ಗೆ |
|---|---|---|
| ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ | ಕಲಾ ಮತ್ತು ವಾಣಿಜ್ಯ ಪದವಿ ತರಗತಿಯ ವಿದ್ಯಾರ್ಥಿನಿಯರು ಮಾತ್ರ | 1 ರಿಂದ 5 ರವರೆಗಿನ ವಿದ್ಯಾರ್ಥಿವೇತನಕ್ಕೆ ವಿದ್ಯಾರ್ಥಿಗಳು ಎಸ್.ಎಸ್.ಪಿ ಪೋರ್ಟಲ್ ಮೂಲಕ ಒಂದೇ ಅರ್ಜಿಯನ್ನು ಸಲ್ಲಿಸಬೇಕು |
| ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ | ವಿಜ್ಞಾನ ಪದವಿ ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯರು | |
| ಹೆಚ್‌ಐವಿ/ಲೆಪ್ರಸಿ ವಿದ್ಯಾರ್ಥಿವೇತನ | ಸರ್ಕಾರಿ, ಅನುದಾನಿತ/ಅನುದಾನರಹಿತ ಪದವಿ/ಸ್ನಾತಕೋತ್ತರ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಹೆಚ್‌ಐವಿ/ಲೆಪ್ರಸಿ ರೋಗ ಪೀಡಿತ ವಿದ್ಯಾರ್ಥಿಗಳು ಅಥವಾ ರೋಗ ಪೀಡಿತ ಪೋಷಕರ ಮಕ್ಕಳು | |
| ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ | ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳು | |
| ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ | ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿನಿಯರು. | |

ವಿದ್ಯಾರ್ಥಿಗಳ ಗಮನಕ್ಕೆ

Principal
Sri Adichunchanagiri First Grade College
Channarayapatna-573 116
30/10/23

ಷರತ್ತುಗಳು ಮತ್ತು ನಿಬಂಧನೆಗಳು

1.ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ವಿಜ್ಞಾನದ ಕೋರ್ಸ್ ಗಳಿಗೆ ಪ್ರವೇಶ ಪಡೆದು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಭೂಗರ್ಭಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿ ಶಾಸ್ತ್ರ ವಿಷಯಗಳಲ್ಲಿ ಕನಿಷ್ಠ 2 ವಿಷಯಗಳನ್ನಾದರೂ ತೆಗೆದುಕೊಂಡು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 65 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮಾತ್ರ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

2. ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಕಲಾ ಮತ್ತು ವಾಣಿಜ್ಯ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಮಾತ್ರ ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿನಿಯರು ಮಾತ್ರ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 75 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿನಿಯರು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

3. ಹೆಚ್ಐವಿ/ಲೆಪ್ರಸಿ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಪ್ರಥಮ ಪದವಿ ತರಗತಿ ಅಥವಾ ಸ್ನಾತಕೋತ್ತರ ತರಗತಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಹೆಚ್ಐವಿ/ಲೆಪ್ರಸಿ ರೋಗ ಪೀಡಿತ ವಿದ್ಯಾರ್ಥಿಗಳು ಅಥವಾ ಹೆಚ್ಐವಿ/ಲೆಪ್ರಸಿ ರೋಗ ಪೀಡಿತ ಪೋಷಕರ ಮಕ್ಕಳು ಮಾತ್ರ ಈ ಯೋಜನೆಯಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಈ ಯೋಜನೆಯಡಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಇತರ ಇಲಾಖೆಗಳು ನೀಡುವ ವಿದ್ಯಾರ್ಥಿವೇತನಕ್ಕೆ ಅರ್ಹರಿರುವುದಿಲ್ಲ.

ಷರತ್ತುಗಳು ಮತ್ತು ನಿಬಂಧನೆಗಳು

1.ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ವಿಜ್ಞಾನದ ಕೋರ್ಸ್ ಗಳಿಗೆ ಪ್ರವೇಶ ಪಡೆದು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಭೂಗರ್ಭಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿ ಶಾಸ್ತ್ರ ವಿಷಯಗಳಲ್ಲಿ ಕನಿಷ್ಠ 2 ವಿಷಯಗಳನ್ನಾದರೂ ತೆಗೆದುಕೊಂಡು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 65 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮಾತ್ರ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

2. ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಕಲಾ ಮತ್ತು ವಾಣಿಜ್ಯ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಮಾತ್ರ ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿನಿಯರು ಮಾತ್ರ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 75 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿನಿಯರು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

3. ಹೆಚ್‌ಐವಿ/ಲೆಪ್ರಸಿ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಪ್ರಥಮ ಪದವಿ ತರಗತಿ ಅಥವಾ ಸ್ನಾತಕೋತ್ತರ ತರಗತಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಹೆಚ್‌ಐವಿ/ಲೆಪ್ರಸಿ ರೋಗ ಪೀಡಿತ ವಿದ್ಯಾರ್ಥಿಗಳು ಅಥವಾ ಹೆಚ್‌ಐವಿ/ಲೆಪ್ರಸಿ ರೋಗ ಪೀಡಿತ ಪೋಷಕರ ಮಕ್ಕಳು ಮಾತ್ರ ಈ ಯೋಜನೆಯಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಈ ಯೋಜನೆಯಡಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಇತರ ಇಲಾಖೆಗಳು ನೀಡುವ ವಿದ್ಯಾರ್ಥಿವೇತನಕ್ಕೆ ಅರ್ಹರಿರುವುದಿಲ್ಲ.

E-6796784/23
9/11/23

# ಕರ್ನಾಟಕ ಸರ್ಕಾರದ ನಡವಳಿಗಳು

ಸರ್ಕಾರದ ಉಪ ಮುಖ್ಯ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)

Sri Adichunchanagiri First Grade College
Channarayapatna
Est. 1979

**ವಿಷಯ:-** ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮದ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 05.10.2013.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 429 ಬಿಎಂಎಸ್ 2014 ಬೆಂಗಳೂರು ದಿನಾಂಕ:04.09.2014.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 27.01.2014.
4. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 20.02.2014.
5. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 06.08.2014.
6. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 23 ಬಿಎಂಎಸ್ 2021, ಬೆಂಗಳೂರು, ದಿನಾಂಕ: 08.02.2021.
7. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 357 ಬಿಎಂಎಸ್ 2020, ಬೆಂಗಳೂರು, ದಿನಾಂಕ: 16.07.2021.
8. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಮಾರ್ಗಸೂಚಿಗಳು(2021-2022 ರಿಂದ 2025-26).
9. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆBCWD-17/28/2023-BCWD_SCHLR-BCWD, ದಿನಾಂಕ:13.10.2023.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಿಂದ (7) ರವರೆಗಿನ ಆದೇಶಗಳಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಂಬಂಧ, ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

ಮೇಲೆ ಓದಲಾದ (8)ರಲ್ಲಿ ಪ್ರಸ್ತುತ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು PM-YASASVI ಯೋಜನೆಯ (2021-2022 ರಿಂದ 2025-2026) ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ನೀಡಲಾಗಿರುವ ಮಾರ್ಗಸೂಚಿಗಳನ್ನು ಬದಲಾಯಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ (9)ರ ಆಯುಕ್ತರ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಂಬಂಧ, ಈ ಹಿಂದಿನ ಸರ್ಕಾರದ ಆದೇಶಗಳಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಪ್ರಸ್ತುತ ಕೇಂದ್ರ ಸರ್ಕಾರವು PM YASASVI ಯೋಜನೆಯಡಿಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಲಾಗಿರುವುದರಿಂದ ಹಾಗೂ ಕಾರ್ಯಕ್ರಮದ ಅನುಷ್ಠಾನದಲ್ಲಿ ಕೆಲವು ಅಗತ್ಯ ಮಾರ್ಪಾಡುಗಳನ್ನು ಮಾಡುವ ಅವಶ್ಯಕತೆ ಇರುವ ಹಿನ್ನೆಲೆಯಲ್ಲಿ ಈ ಹಿಂದಿನ ಆದೇಶಗಳನ್ನು ನಿರಶನಗೊಳಿಸಿ, ಹೊಸದಾಗಿ ಕಾರ್ಯಕ್ರಮದ ಮಾರ್ಗಸೂಚಿಗಳಂತೆ ಪರಿಷ್ಕರಿಸಿ

.....2

08/11/23

To,
Dr. N.T. Nagaraj

Principal 13/11/23
Sri Adichunchanagiri First Grade Collage
Channarayapatna-573 116

# ಮೈಸೂರು ವಿಶ್ವವಿದ್ಯಾನಿಲಯ

(4ನೇ ಆವೃತ್ತಿಯ ನ್ಯಾಕ್ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್.-2023: ವಿಶ್ವವಿದ್ಯಾನಿಲಯ ವರ್ಗದಲ್ಲಿ 44ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 71ನೇ ಸ್ಥಾನ)

E.Mail:- aoofficemgm@gmail.com
Office Ph.No: 0821-2419359/58/57

No. 319
Dt. 16/12/23
573116

ಸಂಖ್ಯೆ/ಆ.ಕ./ಎಡಿ4/ /2023-24

ಆಡಳಿತಾಧಿಕಾರಿಯವರ ಕಛೇರಿ
ಮಾನಸಗಂಗೋತ್ರಿ, ಮೈಸೂರು.
ದಿನಾಂಕ: 02-12-2023

## ಸುತ್ತೋಲೆ

ವಿಷಯ: SSP ವಿದ್ಯಾರ್ಥಿವೇತನಕ್ಕೆ ಅರ್ಜಿಸಲ್ಲಿಸುವ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ SSP ಐಡಿ ಯು ನಿಮ್ಮ ಕಾಲೇಜಿನ ವತಿಯಿಂದ ಸಲ್ಲಿಕೆ ಆಗಿಲ್ಲ ಎಂದು ಬಂದಲ್ಲಿ ಈ ಕೆಳಕಂಡ ಕ್ರಮಕೈಗೊಳ್ಳಲು ತಿಳಿಸಲಾಗಿದೆ. .

*****

1. UUCMS. ಅಡಿಯಲ್ಲಿ ಪ್ರವೇಶಾತಿ ಪಡೆದ ದ್ವಿತಿಯ ವರ್ಷದ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳು UUCMS. ಪೋರ್ಟಲ್‌ನಲ್ಲಿ ವಿದ್ಯಾರ್ಥಿಗಳ ಲಾಂಗಿನ್‌ನಲ್ಲಿ ಆಧಾರ್ **Revalideted** ಎಂದು ಆಯ್ಕೆ ಮಾಡಿ ಅದರಲ್ಲಿ ವಿದ್ಯಾರ್ಥಿಯ ಹೆಸರು ಹಾಗೂ ವಿದ್ಯಾರ್ಥಿಯ ದೂರವಾಣಿ ಸಂಖ್ಯೆಯನ್ನು ನಮೂದಿಸಿದ ನಂತರ ವಿದ್ಯಾರ್ಥಿಯ ಹೆಸರು ಮತ್ತು ವಿದ್ಯಾರ್ಥಿಯ ಆಧಾರ್ ನಂಬರ್ ಅನ್ನು ನಮೂದಿಸಿ ಆಧಾರ್ **Revalideted** ಮಾಡಿದ ನಂತರ ಕಾಲೇಜಿನ **Admin Login** ಗೆ ವಿದ್ಯಾರ್ಥಿಯ ಆಧಾರ್ **Revalideted** ಬರುವುದು ಅದನ್ನು ಕಾಲೇಜಿನ UUCMS **Admin Login** ನಲ್ಲಿ ಅಪ್ರೋವ್ ಕೊಟ್ಟ ನಂತರ ವಿದ್ಯಾರ್ಥಿಗೆ SSP ವಿದ್ಯಾರ್ಥಿವೇತನಕ್ಕೆ ಅರ್ಜಿಸಲ್ಲಿಸಲು ಸಾಧ್ಯವಾಗುವುದು ಎಂಬ ವಿಷಯವನ್ನು ಎಲ್ಲಾ ಕಾಲೇಜುಗಳ UUCMS ಹಾಗೂ SSP ನೋಡಲ್ ಆಫೀಸರ್‌ಗಳು ವಿದ್ಯಾರ್ಥಿಗಳ ಗಮನಕ್ಕೆ ತರಬಯಸುತ್ತೇವೆ.

ಇವರಿಗೆ :
ಎಲ್ಲಾ ಅಧ್ಯಯನ ವಿಭಾಗದ ಅಧ್ಯಕ್ಷರು, ನಿರ್ದೇಶಕರು, ಸಂಯೋಜನಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
ನೋಡಲ್ ಅಫೀಸರ್ ಅಂಕಿ ಅಂಶಗಳ ಘಟಕ, ಮಾನಸಗಂಗೋತ್ರಿ, ಮೈಸೂರು ರವರಿಗೆ (ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಹಾಗೂ ಖಾಸಗಿ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಕ್ರಮ ಕೈಗೊಳ್ಳಲು ಸೂಚಿಸಿದೆ)
ಕುಲಸಚಿವರು ಮೈಸೂರು ವಿಶ್ವವಿದ್ಯಾನಿಲಯ ಮೈಸೂರು.
ಹಣಕಾಸು ಅಧಿಕಾರಿಗಳು ಮೈಸೂರು ವಿಶ್ವವಿದ್ಯಾನಿಲಯ ಮೈಸೂರು.
ಕಛೇರಿ ಪ್ರತಿ

Principal
Adichunchanagiri First Grade Collage
Channarayapatna-573116

**ಕರ್ನಾಟಕ ಸರ್ಕಾರ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಆಯುಕ್ತರ ಕಛೇರಿ, ನಂ.16/-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-52.**

**ಸಂಖ್ಯೆ:BCWD-12022/1/2023-BCWD_HOSTEL-BCWD** **ದಿನಾಂಕ:13.12.2023**

**ಪ್ರಕಟಣೆ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (ವೃತ್ತಿಪರ ಪದವಿ ಮತ್ತು ಸ್ನಾತಕೊತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ ದಿನಾಂಕವನ್ನು ವಿಸ್ತರಿಸುವ ಕುರಿತು.**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ವೃತ್ತಿಪರ ಪದವಿ ಮತ್ತು ಸ್ನಾತಕೊತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪ.ಜಾ/ಪ.ವರ್ಗ ಸೇರಿದ ವಿದ್ಯಾರ್ಥಿಗಳಿಂದ 2023-24ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ**

| | |
|---|---|
| ಪ್ರವರ್ಗ-1, ಎಸ್.ಸಿ & ಎಸ್.ಟಿ | ರೂ.2.50 ಲಕ್ಷ |
| ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ | ರೂ.1.00 ಲಕ್ಷ |

- ವಿದ್ಯಾರ್ಥಿಗಳು https://shp.karnataka.gov.in ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 22.12.2023.
- ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ನೋಡಬಹುದು.
- ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು

**ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ 8050770005**

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

ವಿದ್ಯಾರ್ಥಿಗಳ ಗಮನಕ್ಕೆ

14-12-23
Principal
Sri Adichunchanagiri First Grade College
Channarayapatna-573 116